# ಕರ್ನಾಟಕ ಸರ್ಕಾರ

**ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಸೆಂಟ್ರಲ್ ಜೂನಿಯರ್ ಕಾಲೇಜು ಆವರಣ, ಕೆಂಪೇಗೌಡ ರಸ್ತೆ, ಬೆಂಗಳೂರು-560009**

**Phone:** 22228805, 22483140, 22483145 **e-mail :-** cackarnataka@gmail.com

ಸಂಖ್ಯೆ:ಸಿಎಸಿ-03/GPTR-2022/ನೇ.ಪ್ರಕ್ರಿಯೆ/2021-22 ದಿನಾಂಕ:21-04-2022

## ಪ್ರಕಟಣೆ

ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕ (6 ರಿಂದ 8ನೇ ತರಗತಿ) ನೇಮಕಾತಿ-2022ಕ್ಕೆ ಸಂಬಂಧಿಸಿದಂತೆ ಇಲಾಖಾ ವೆಬ್‌ಸೈಟ್ www.schooleducation.kar.nic.in ನಲ್ಲಿ **Registration ಮಾಡಿಕೊಳ್ಳುವ ಮೂಲಕ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಲು ದಿನಾಂಕ:23-03-2022 ರಿಂದ 22-04-2022ರ ವರೆಗೆ ಅವಕಾಶ ಕಲ್ಪಿಸಲಾಗಿತ್ತು**. ಅದರಂತೆ ಹಲವಾರು ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುತ್ತಾರೆ. ಇನ್ನೂ ಹಲವು ಅಭ್ಯರ್ಥಿಗಳು ಕೇವಲ Registration ಮಾತ್ರ ಮಾಡಿಕೊಂಡು, ಅರ್ಜಿಯಲ್ಲಿ ವಿವರಗಳನ್ನು ಭರ್ತಿ ಮಾಡಿರುವುದಿಲ್ಲ. ಅಂತಹ ಅಭ್ಯರ್ಥಿಗಳಿಗೆ ಅನುಕೂಲಿಸುವ ಸಲುವಾಗಿ ಅರ್ಜಿ ಶುಲ್ಕ ಪಾವತಿಸಲು ದಿನಾಂಕ:26-04-2022 ರವರೆಗೆ ಕಾಲಾವಕಾಶ ನೀಡಲಾಗಿದೆ. ಆದರೆ ಅಭ್ಯರ್ಥಿಯು ಈ ಕೆಳಕಂಡ ಸೂಚನೆಗಳನ್ನು ಪಾಲಿಸಬೇಕು.

## ಸೂಚನೆಗಳು

1. ಪ್ರತಿ ಹೊಸ ಅರ್ಜಿಗೆ New User Name ಮತ್ತು Password ಅನ್ನು ಬಳಸಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಲು **(Registration) ದಿನಾಂಕ:22-04-2022 ರಾತ್ರಿ 12.00 ರವರೆಗೆ** ಮಾತ್ರ ಅವಕಾಶವಿರುತ್ತದೆ.
2. **ದಿನಾಂಕ:22-04-2022 ರಾತ್ರಿ 12.00 ಗಂಟೆಯ ನಂತರ ಹೊಸದಾಗಿ Registration ಮಾಡಿಕೊಳ್ಳಲು ಹಾಗೂ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.**
3. **ದಿನಾಂಕ:22-04-2022 ರಾತ್ರಿ 12.00 ರೊಳಗೆ ತಮ್ಮ ಹೆಸರನ್ನು ನೊಂದಾಯಿಸಿಕೊಂಡಿರುವ** (Registration) ಅಭ್ಯರ್ಥಿಗಳಿಗೆ ಮಾತ್ರ ಆನ್‌ಲೈನ್ ಅರ್ಜಿಯಲ್ಲಿ ಸಂಪೂರ್ಣ ವಿವರಗಳನ್ನು ಭರ್ತಿ ಮಾಡಿ, ಶುಲ್ಕವನ್ನು ಪಾವತಿಸಲು ಅವಕಾಶವಿರುತ್ತದೆ.
4. **ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ:26-04-2022 ಆಗಿರುತ್ತದೆ.** ಈ ದಿನಾಂಕದ ನಂತರ ಯಾವುದೇ ಕಾರಣಕ್ಕೂ ಅರ್ಜಿ ಶುಲ್ಕ ಪಾವತಿಸಲು ಅವಕಾಶ ವಿರುವುದಿಲ್ಲ.
5. ಅಭ್ಯರ್ಥಿಯು ಆನ್‌ಲೈನ್ ಅರ್ಜಿಯಲ್ಲಿ ವಿವರಗಳನ್ನು ಭರ್ತಿ ಮಾಡಿ ಶುಲ್ಕ ಪಾವತಿಸಿದ ನಂತರ ಆನ್‌ಲೈನ್ ಅರ್ಜಿಯ ಮುದ್ರಿತ ಪ್ರತಿಯನ್ನು ಪಡೆದಿಟ್ಟುಕೊಳ್ಳುವುದು ಕಡ್ಡಾಯವಾಗಿರುತ್ತದೆ

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು.